ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಫ್ಲಾಟ್ ನಂ. 1,2,3,4, ಕೆ.ಎಸ್.ಐ.ಐ.ಡಿ.ಸಿ, ರಾಜಾಜಿನಗರ ಐಟಿ ಪಾರ್ಕ್
5ನೇ ಮಹಡಿ, ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರೀಯಲ್ ಎಸ್ಟೇಟ್, ಬೆಂಗಳೂರು-10
ದೂರವಾಣಿ ಸಂಖ್ಯೆ: 080-22372738, ಈ-ಮೇಲ್ : karnregs@gmail.com

ಸಂಖ್ಯೆ: ಆರ್‌ಡಿಸಿ-ಇಜಿಎಸ್/22/2022 ದಿನಾಂಕ: 07-02-2022

ಇವರಿಗೆ,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೇ,

**ವಿಷಯ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು (CLF) ಕಾರ್ಯಕ್ರಮ ಅನುಷ್ಠಾನ ಸಂಸ್ಥೆಯಾಗಿ (PIA) ಪರಿಗಣಿಸಿ ಅಗತ್ಯ ಕ್ರಮವಹಿಸುವ ಬಗ್ಗೆ.

**ಉಲ್ಲೇಖ:**
1. ಆಯುಕ್ತಾಲದ ಜಂಟಿ ಸುತ್ತೋಲೆ ಗ್ರಾಅಪ: 123 ಉಖಾಯೋ 2021, ದಿನಾಂಕ: 17-11-2021.
2. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಕಾರ್ಯದರ್ಶಿಗಳ ಅರೆ ಸರ್ಕಾರಿ ಪತ್ರದ ಸಂಖ್ಯೆ: DO#J-11060/4/2019-RE-VI (366816) ದಿನಾಂಕ: 06-01-2022.
3. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಕಾರ್ಯದರ್ಶಿಗಳ ಅರೆ ಸರ್ಕಾರಿ ಪತ್ರದ ಸಂಖ್ಯೆ: DO#J-11060/4/2019-RE-VI (366816) ದಿನಾಂಕ: 06-01-2022.
4. ಆಯುಕ್ತಾಲಯದ ಪತ್ರ ಸಂಖ್ಯೆ: ಆರ್‌ಡಿಸಿ-ಇಜಿಎಸ್/119/2021, ದಿನಾಂಕ: 18-01-2022
5. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ನಿರ್ದೇಶಕರ ಪತ್ರದ ಸಂಖ್ಯೆ: ದಿನಾಂಕ: 27-01-2022.

A.S (Dev)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ನರೇಗಾ ವಾರ್ಷಿಕ ಪ್ರಧಾನ ಸುತ್ತೋಲೆ 2020-21ರ ಕಂಡಿಕೆ 7.2.1(19) ರಲ್ಲಿ ನರ್ಸರಿಗಳ ಅಭಿವೃದ್ಧಿಯನ್ನು ವೈಯಕ್ತಿಕ/ಸಮುದಾಯ/ಗುಂಪುಗಳಿಂದ ಬೆಳೆಸಲು ಅವಕಾಶ ಕಲ್ಪಿಸಲಾಗಿರುತ್ತದೆ. ದಿನಾಂಕ: 09-11-2021 ರಂದು ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ರೇಷ್ಮೆ, ಅರಣ್ಯ ಹಾಗೂ ತೋಟಗಾರಿಕೆ ಸಸಿಗಳನ್ನು ಸ್ವಸಹಾಯ ಸಂಘಗಳ ಮೂಲಕ ಉತ್ಪಾದನೆ ಮಾಡಲು ಅಗತ್ಯ ಕ್ರಮವಹಿಸಲು ಸೂಚಿಸಿರುತ್ತಾರೆ. ಈ ಕುರಿತು ಉಲ್ಲೇಖ (1) ರ ಪತ್ರದನ್ವಯ ಪ್ರತಿ ತಾಲ್ಲೂಕು ಮಟ್ಟದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಸ್ಥೆಯಡಿ (CLF) ರಚಿತವಾಗಿರುವ ಗ್ರಾಮ ಪಂಚಾಯತಿ ಮಟ್ಟದ ಸ್ವಸಹಾಯ ಸಂಘಗಳ ಒಕ್ಕೂಟದಿಂದ (GPLF) ನರ್ಸರಿ ಅಭಿವೃದ್ಧಿಪಡಿಸಲು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಉಲ್ಲೇಖ (2), (3) ಮತ್ತು (5) ರ ಪತ್ರಗಳಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಕಾರ್ಯದರ್ಶಿಗಳು ನರೇಗಾ ಯೋಜನೆಯಡಿ ಜೀವನೋಪಾಯ ವೈಯಕ್ತಿಕ ಕಾಮಗಾರಿಗಳಾದ ಕೃಷಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ರಸ್ತೆ ಬದಿ ನೆಡುತೋಪು ಮತ್ತು ಪಶು ಸಂಗೋಪನೆ ಇತ್ಯಾದಿಗಳನ್ನು ಅನುಷ್ಠಾನಗೊಳಿಸಲು ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು (CLF) ಕಾರ್ಯಕ್ರಮ ಅನುಷ್ಠಾನ ಸಂಸ್ಥೆಯನ್ನಾಗಿ (PIA) ಪರಿಗಣಿಸುವಂತೆ ತಿಳಿಸಿರುತ್ತಾರೆ. ಉಲ್ಲೇಖ (4) ರಲ್ಲಿ ನರೇಗಾ ಯೋಜನೆಯಡಿ ಅರ್ಹ ವೈಯಕ್ತಿಕ ಫಲಾನುಭವಿಗಳ ಜಮೀನುಗಳಲ್ಲಿ ಕನಿಷ್ಠ ಶೇ. 20% ಜಾಗದಲ್ಲಿ ತೋಟಗಾರಿಕೆ ಬೆಳೆಗಳಿಗೆ ವಿಶೇಷ ಆದ್ಯತೆ ನೀಡಿ ಅಭಿವೃದ್ಧಿ ಪಡಿಸಲು ಸೂಚಿಸಲಾಗಿರುತ್ತದೆ.

ದಿನಾಂಕ: 28-01-2022 ರಂದು ನಡೆದ ವಿಡಿಯೋ ಸಂವಾದದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ನರೇಗಾ ಯೋಜನೆಯ ಜಂಟಿ ಕಾರ್ಯದರ್ಶಿಗಳು ವಿಸ್ತೃತವಾಗಿ ನರೇಗಾ ಯೋಜನೆಯ ಅನುಷ್ಠಾನದಲ್ಲಿ ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು ಕಾರ್ಯಕ್ರಮ ಅನುಷ್ಠಾನ ಸಂಸ್ಥೆಯನ್ನಾಗಿ ಪರಿಗಣಿಸಿ ಕ್ರಮವಹಿಸುವ ಬಗ್ಗೆ ಸೂಚಿಸಿರುತ್ತಾರೆ. ಕ್ಲಸ್ಟರ್ ಮಟ್ಟದ ಒಕ್ಕೂಟಗಳ ಪಾತ್ರ, ಫಲಾನುಭವಿಗಳ ಆಯ್ಕೆ, ಅಂದಾಜು ಪಟ್ಟಿಗಳ ತಯಾರಿಕೆ, ಅಳತೆ ಪುಸ್ತಕ ದಾಖಲು, ದಾಖಲಾತಿಗಳ ಸುಪರ್ದಿ, ನಿಗದಿತ ಅವಧಿಯಲ್ಲಿ ಎನ್‌ಎಮ್‌ಆರ್ ಪಾವತಿ ಕುರಿತು ವಿವರಿಸಿರುತ್ತಾರೆ. ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು ಕಾರ್ಯಕ್ರಮ ಅನುಷ್ಠಾನ ಸಂಸ್ಥೆಯನ್ನಾಗಿ ಪರಿಗಣಿಸಿದ ನಂತರ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಸ್ಥೆಯ TPM ಮತ್ತು DPM ಗಳ ಪಾತ್ರ, ಜಿಲ್ಲೆಯ ತಾಂತ್ರಿಕ ಅನುಷ್ಠಾನ ಇಲಾಖೆಗಳಾದ ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಇಲಾಖೆ ಹಾಗೂ ತಾಂತ್ರಿಕ ಪರಿಣಿತಿ ಹೊಂದಿದ CSO ಇದ್ದಲ್ಲಿ ಅವುಗಳ ಮೂಲಕ ಎಲ್ಲಾ ಕ್ಲಸ್ಟರ್ ಮಟ್ಟದ ಒಕ್ಕೂಟಗಳ ಸದಸ್ಯರುಗಳಿಗೆ ಹಾಗೂ TPM ಮತ್ತು DPM ಗಳಿಗೆ ನರೇಗಾ ಯೋಜನೆಯ ಅನುಷ್ಠಾನದ ಕುರಿತು ತರಬೇತಿ ಹಾಗೂ ನರ್ಸರಿ ಉತ್ಪಾದನೆ ಕುರಿತು ತರಬೇತಿ ಆಯೋಜಿಸಲು ಸೂಚಿಸಿರುತ್ತಾರೆ.

ಈ ಕುರಿತು ದಿನಾಂಕ: 01-02-2022 ರಂದು ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಎನ್‌ಆರ್‌ಎಲ್‌ಎಮ್ ರವರೊಂದಿಗೆ ಜರುಗಿದ ಸಭೆಯಲ್ಲಿ ಚರ್ಚಿಸಲಾಗಿದ್ದು, **ಫೆಬ್ರುವರಿ 10 ರಿಂದ ಮಾರ್ಚ್ 10 ರವರೆಗೆ ಅಭಿಯಾನ** ರೂಪದಲ್ಲಿ ಈ ಕೆಳಕಂಡ ಚಟುವಟಿಕೆಗಳನ್ನು ಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ.

| ಕ್ರ.ಸಂ | ಚಟುವಟಿಕೆಗಳು | ಅವಧಿ | ಅಧಿಕಾರಿ/ಸಿಬ್ಬಂದಿಗಳು | ಮೇಲ್ವಿಚಾರಣೆ |
|---|---|---|---|---|
| 1 | ಸಕ್ರಿಯ ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು ಗುರುತಿಸಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡುವುದು. | ಫೆಬ್ರುವರಿ 10 ರಿಂದ ಫೆಬ್ರುವರಿ 15 | ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಸ್ಥೆಯಡಿ TPM ಮತ್ತು DPM ಗಳು | ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು DPM ಗಳು |
| 2 | ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು ಕಾರ್ಯಕ್ರಮ ಅನುಷ್ಠಾನ ಸಂಸ್ಥೆಯನ್ನಾಗಿ ತಂತ್ರಾಂಶದಲ್ಲಿ ಅಳವಡಿಸಿಕೊಳ್ಳುವುದು. | ಫೆಬ್ರುವರಿ 15 ರಿಂದ ಫೆಬ್ರುವರಿ 20 | ADPC, DMIS and NRLM DPM | ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು. |
| 3 | ರಾಷ್ಟ್ರೀಯ ಗ್ರಾಮೀಣ ಜೀವನೋಪಾಯಡಿ ಕಾರ್ಯನಿರ್ವಹಿಸುತ್ತಿರುವ TPM/DEO ಗಳಿಗೆ ತರಬೇತಿ. | ಫೆಬ್ರುವರಿ 15 ರಿಂದ ಫೆಬ್ರುವರಿ 20 | ADPC, DMIS and NRLM DPM | ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು. |
| 4 | ಕ್ಲಸ್ಟರ್ ಮಟ್ಟದ ಒಕ್ಕೂಟಗಳ ಸದಸ್ಯರುಗಳಿಗೆ ನರ್ಸರಿ ಅಭಿವೃದ್ಧಿ ಚಟುವಟಿಕೆಗಳಿಗೆ ತಾಂತ್ರಿಕ ಮತ್ತು ಪ್ರಯೋಗಿಕ ತರಬೇತಿ. | ಫೆಬ್ರುವರಿ 20 ರಿಂದ ಫೆಬ್ರುವರಿ 25 | ಜಿಲ್ಲಾ ಮಟ್ಟದ ತೋಟಗಾರಿಕೆ, ರೇಷ್ಮೆ, ಕೃಷಿ, ಅರಣ್ಯ ಹಾಗೂ CSO ಸಂಸ್ಥೆಗಳು | ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು. |
| 5 | ಕ್ಲಸ್ಟರ್ ಮಟ್ಟದ ಒಕ್ಕೂಟಗಳ ಸದಸ್ಯರುಗಳಿಗೆ ಹಾಗೂ TPM ಮತ್ತು DPM ಗಳಿಗೆ ನರೇಗಾ ತಂತ್ರಾಂಶದ ಯೋಜನೆಯ ಅನುಷ್ಠಾನದ ತರಬೇತಿ | ಫೆಬ್ರುವರಿ 25 ರಿಂದ ಫೆಬ್ರುವರಿ 28 | ADPC, DMIS and NRLM DPM | ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು. |
| 6 | ನರೇಗಾ ಯೋಜನೆಯಡಿ ಕ್ಲಸ್ಟರ್ ಮಟ್ಟದ ಒಕ್ಕೂಟಗಳನ್ನು ಅನುಷ್ಠಾನ ಏಜೆನ್ಸಿಯಾಗಿ ಪರಿಗಣಿಸಲು ಕ್ರ.ಸಂ 01 ರಿಂದ 05 ರ ಚಟುವಟಿಕೆಗಳ ಪ್ರಗತಿ ಪರಿಶೀಲನೆ. | ಮಾರ್ಚ್ 01 ರಿಂದ ಮಾರ್ಚ್ 10 | ಜಿಲ್ಲಾ ಪಂಚಾಯತ್ ಮತ್ತು NRLM | ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು. |

೩

ಮೇಲ್ಕಂಡಂತೆ ಜಿಲ್ಲಾ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಂಡು ನರೇಗಾ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕೋರಿದೆ.

ತಮ್ಮ ವಿಶ್ವಾಸಿ,

11/02/22

ಆಯುಕ್ತರು,
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬಹುಮಹಡಿ ಕಟ್ಟಡ ಬೆಂಗಳೂರು ರವರಿಗೆ ಮಾಹಿತಿಗಾಗಿ
2. ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಸ್ಥೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
3. ಕಛೇರಿ ಕಡತ